ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 123 ಡಿಬಿಎಂ 2020

ಕರ್ನಾಟಕ ಸರ್ಕಾರ ಸಚಿವಾಲಯ
ವಿಧಾನ ಸೌಧ
ಬೆಂಗಳೂರು, ದಿನಾಂಕ:30.03.2020

## ಸುತ್ತೋಲೆ

ಕರ್ನಾಟಕ ರಾಜ್ಯದಲ್ಲಿ ಕೊರೊನಾ ವೈರಸ್ (ಕೋವಿಡ್-19) ಸಾಂಕ್ರಾಮಿಕವಾಗಿ ಹರಡುತ್ತಿರುವ ಹಿನ್ನೆಲೆಯಲ್ಲಿ ಸಚಿವಾಲಯ ಸೇರಿದಂತೆ ರಾಜ್ಯಮಟ್ಟದ ಕಛೇರಿಗಳಲ್ಲಿ ಹಾಗೂ ಕರ್ನಾಟಕ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಅತ್ಯಗತ್ಯ ಸೇವೆಗಳನ್ನು ಒದಗಿಸುತ್ತಿರುವ ಇಲಾಖೆಗಳಾದ 1) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ 2) ವೈದ್ಯಕೀಯ ಶಿಕ್ಷಣ ಇಲಾಖೆ 3) ಒಳಾಡಳಿತ ಇಲಾಖೆ 4) ಕಂದಾಯ ಇಲಾಖೆ 5) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ 6) ನಗರಾಭಿವೃದ್ಧಿ ಇಲಾಖೆ 7) ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ 8) ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ 9) ಸಾರಿಗೆ ಇಲಾಖೆ 10) ಪಶು ವೈದ್ಯಕೀಯ ಇಲಾಖೆ ಮತ್ತು 11) ಇಂಧನ ಇಲಾಖೆಗಳನ್ನು ಹೊರತುಪಡಿಸಿ, ಉಳಿದ ಎಲ್ಲಾ ಇತರೆ ಇಲಾಖೆಗಳಲ್ಲಿ ಸರ್ಕಾರಿ ನಿಗಮ/ಮಂಡಳಿಗಳಲ್ಲಿ/ಪ್ರಾಧಿಕಾರಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಗ್ರೂಪ್-ಬಿ, ಗ್ರೂಪ್-ಸಿ ಮತ್ತು ಗ್ರೂಪ್-ಡಿ ಅಧಿಕಾರಿ/ನೌಕರರುಗಳಿಗೆ ದಿನಾಂಕ: 24.03.2020 ರಿಂದ 31.03.2020 ರವರೆಗೆ ಕಛೇರಿಗೆ ಬರುವುದರಿಂದ ವಿನಾಯಿತಿ ನೀಡಲಾಗಿತ್ತು.

ಮುಂದುವರೆದು, ಕರ್ನಾಟಕ ರಾಜ್ಯದಲ್ಲಿ ಕೊರೊನಾ ವೈರಸ್ (ಕೋವಿಡ್-19) ಸಾಂಕ್ರಾಮಿಕವಾಗಿ ಹರಡುತ್ತಿರುವ ಹಿನ್ನೆಲೆಯಲ್ಲಿ, ದಿನಾಂಕ 23.03.2020ರಂದು ಹೊರಡಿಸಿರುವ ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 123 ಡಿಬಿಎಂ 2020ನ್ನು ದಿನಾಂಕ:14.04.2020ರ ಮಧ್ಯರಾತ್ರಿ 12.00ಗಂಟೆವರೆಗೆ ಮುಂದುವರೆಸಲಾಗಿದೆ.

..........2

Scanned with CamScanner

ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಇತರೆ ಎಲ್ಲಾ ಸರ್ಕಾರಿ ಇಲಾಖೆಗಳ ಹಾಗೂ ಈ ಇಲಾಖೆಗಳ ಸರ್ಕಾರಿ ನಿಗಮ/ಮಂಡಳಿಗಳ/ಪ್ರಾಧಿಕಾರಗಳ ಅಧಿಕಾರಿಗಳ ಸೇವೆಯನ್ನು ಕೋವಿಡ್-19 ನಿಯಂತ್ರಣಕ್ಕಾಗಿ ಆಯಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಅಗತ್ಯವಿದ್ದಲ್ಲಿ ಅವರ ಸೇವೆಯನ್ನು ಪಡೆಯಲು ಸೂಚಿಸಿದೆ.

(ಟಿ.ಎಂ. ವಿಜಯ್ ಭಾಸ್ಕರ್)
ಮುಖ್ಯ ಕಾರ್ಯದರ್ಶಿ
ಕರ್ನಾಟಕ ಸರ್ಕಾರ

ಇವರಿಗೆ:

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು
2. ಎಲ್ಲಾ ಇಲಾಖಾ ಮುಖ್ಯಸ್ಥರು

Scanned with CamScanner